7

ಇಲಾಖೆ / ವಿಷಯ : DEPARTMENT / SUBJECT: 7 - ಇ-ಕಛೇರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 22/7/2020

### ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ವಿಳಂಬ | ಬಿಎಸ್‌ವೈ ಕಚೇರಿಯಿಂದ ಹೊರ ಬಾರದ ಫೈಲ್‌ಗಳು

# ಸರ್ವರ್‌ಡೌನ್ ಹೆಸರಲ್ಲಿ ಕಡತ ವಿಲೇವಾರಿ ಕುಂಠಿತ

22/7/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಸಕಾಲಕ್ಕೆ ಫೈಲ್ ವಿಲೇವಾರಿ ಆಗಬೇಕೆಂಬ ಉದ್ದೇಶದಿಂದ ಇ-ಕಚೇರಿಗೆ ಅವಕಾಶ ನೀಡಿದ್ದು, ಇದೀಗ ಅನೇಕ ಫೈಲ್‌ಗಳು ತಡವಾಗಲು ಕಾರಣವಾಗಿದೆ ಎನ್ನುವ ಆರೋಪ ಕೇಳಿಬಂದಿದೆ.

ಕರೋನಾ ಶುರುವಾದ ಬಳಿಕ ಮುಖ್ಯಮಂತ್ರಿ ಕಚೇರಿಯನ್ನು ಇ-ಕಚೇರಿ ವ್ಯಾಪ್ತಿಗೆ ಒಳಪಡಿಸಿ, ಎಲ್ಲ ಇಲಾಖೆಗಳ ಕಡತಗಳು ಆನ್‌ಲೈನ್ ಮೂಲಕವೇ ರವಾನಿಸಬೇಕು ಎನ್ನುವ ಸೂಚನೆಯನ್ನು ನೀಡಲಾಗಿತ್ತು. ಆದರೆ ಇದನ್ನೇ ಬಂಡವಾಳವಾಗಿರಿಸಿಕೊಂಡ ಕೆಲ ಅಧಿಕಾರಿಗಳು ಸರ್ವರ್ ನೆಪದಲ್ಲಿ ಫೈಲ್ ವಿಲೇವಾರಿಯನ್ನು ತಡವಾಗಿಸುತ್ತಿದ್ದಾರೆ ಎನ್ನುವ ಮಾತುಗಳು ಕೇಳಿಬಂದಿದೆ. ಆನ್‌ಲೈನ್ ಮೂಲಕ ಕಡತ ವಿಲೇವಾರಿ ಮಾಡುವುದರಲಿ ಸುಧಾರಣೆ ಕಂಡಿಲ್ಲ. ಸಚಿವಾಲಯದಲ್ಲಿ ಯಾವಾಗ ನೋಡಿದರೂ ಸರ್ವರ್ ಡೌನ್ ಎಂದು ದೂರು ಹೇಳಿಕೊಳ್ಳುವುದು ಸಾಮಾನ್ಯವಾಗಿದೆ. ಪ್ರಮುಖವಾಗಿ ಮುಖ್ಯಮಂತ್ರಿಗಳ ಅಧಿಕೃತ ಕಚೇರಿ ಕೃಷ್ಣಾದಲ್ಲೇ ಪ್ರಮುಖ ಇಲಾಖೆಗಳ ಸಾವಿರಾರು ಕಡತಗಳು ಎರಡರಿಂದ ಮೂರು ತಿಂಗಳಾದರೂ ವಿಲೇವಾರಿಯಾಗದೇ ಬಾಕಿ ಉಳಿದಿವೆ ಎನ್ನುವ ಮಾತುಗಳು ಕೇಳಿಬಂದಿದೆ.

**ಪ್ರಮುಖ ಇಲಾಖೆ ಕಡತ ಬಾಕಿ**

ಪ್ರಮುಖವಾಗಿ ಆರ್ಥಿಕ, ಕಂದಾಯ, ಲೋಕೋಪಯೋಗಿ, ನಗರಾಭಿವೃದ್ಧಿ, ಪೌರಾಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಜಲಸಂಪನ್ಮೂಲ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಉನ್ನತ ಶಿಕ್ಷಣ, ಆರೋಗ್ಯ ಮತ್ತು ಕುಟುಂಬ



ಕಲ್ಯಾಣ, ಬೃಹತ್ ಕೈಗಾರಿಕೆ, ಸಹಕಾರ, ಸಮಾಜ ಕಲ್ಯಾಣ, ಕೃಷಿ, ಕಾರ್ಮಿಕ ಸೇರಿದಂತೆ ಪ್ರಮುಖ ಇಲಾಖೆಗಳ ಕಡತಗಳು ವಿಲೇವಾರಿಯಾಗಿಲ್ಲ. ಯಾವುದೇ ಕಡತಗಳನ್ನು ಬಾಕಿ ಉಳಿಸಿಕೊಳ್ಳದೆ ಒಂದು ವಾರದೊಳಗೆ ವಿಲೇವಾರಿ ಮಾಡಬೇಕೆಂದು ಖುದ್ದು ಅಧಿಕಾರಿಗಳಿಗೆ ಸಿಎಂ ಸೂಚನೆ ಕೊಟ್ಟಿದ್ದರು. ಆದರೆ, ಅಧಿಕಾರಿಗಳು ನಾನಾ ಕಾರಣಗಳನ್ನು ನೀಡಿ ಕಡತಗಳನ್ನು ವಿಲೇವಾರಿ ಮಾಡದೆ ಹಾಗೆಯೇ ಉಳಿಸಿಕೊಂಡಿರುವುದಕ್ಕೆ ಅಧಿಕಾರಿ ವಲಯದಲ್ಲೇ ಸಂಶಯಗಳು ವ್ಯಕ್ತವಾಗಿವೆ.

ಇನ್ನು ಕಡತ ವಿಲೇವಾರಿ ವಿಳಂಬದ ಹಿಂದೆ ಭ್ರಷ್ಟಾಚಾರದ ವಾಸನೆಯೂ ಇದೆ. ಇದೇ ಕಾರಣದಿಂದ ಉದ್ದೇಶಪೂರ್ವಕವಾಗಿ ಕಡತಗಳನ್ನು ಸಚಿವಾಲಯದಲ್ಲಿ ಹಾಗೆಯೇ ಇಟ್ಟುಕೊಳ್ಳಲಾಗುತ್ತಿದೆ. ಕಡತಗಳು ಕದಲದಂತೆ ಮಾಡುವುದೇ ಒಂದು ವ್ಯವಸ್ಥಿತ ತಂತ್ರವಾಗಿದೆ ಎಂಬ ಆರೋಪ ಇದೀಗ ವಿಧಾನಸೌದಲ್ಲಿ ಕೇಳಿಬಂದಿದೆ. ಮುಖ್ಯಮಂತ್ರಿಗಳು ಫೈಲ್ ಕ್ಲಿಯರ್ ಮಾಡಲು ಹೇಳಿರುವ ಅನೇಕ ಕಡತಗಳು ವಿಲೇವಾರಿಯಾಗದೇ, ಬಾಕಿ ಉಳಿದಿವೆ ಎನ್ನುವ ಆರೋಪಗಳು ಇದೀಗ ಕೇಳಿಬಂದಿದೆ. ಸಚಿವ ಸಂಪುಟದಲ್ಲಿ ಈ ಬಗ್ಗೆ ಪ್ರಸ್ತಾಪವಾಗಿ ಸಚಿವರು ವಾರದಲ್ಲಿ ಎರಡು ದಿನ ವಿಧಾನಸೌಧದಲ್ಲಿ ಕುಳಿತು ಕಡತ ವಿಲೇವಾರಿ ಮಾಡಬೇಕು ಎಂದು ಸಿಎಂ ಸೂಚಿಸಿದ್ದರು. ಅಲ್ಲದೆ, ಬಾಕಿ ಕಡತ ವಿಲೇವಾರಿ ಆಗುವವರೆಗೆ 'ಭಾನುವಾರವೂ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದ್ದರು. ಆದರೆ ಇದ್ಯಾವುದಕ್ಕೂ ಅಧಿಕಾರಿಗಳು ತಲೆಕೆಡಿಸಿಕೊಳ್ಳುತ್ತಿಲ್ಲ ಎನ್ನುವ ಮಾತುಗಳು ಕೇಳಿಬಂದಿದೆ.

### ಪ್ರತ್ಯೇಕ ತಂಡ ರಚಿಸಿದ್ದ ಸಿಎಂ

**ಕಡತ ವಿಲೇವಾರಿ ತಡವಾಗುತ್ತಿರುವ ಬಗ್ಗೆ ಶಾಸಕರು, ಪರಿಷತ್ ಸದಸ್ಯರು ಕೆಲ ತಿಂಗಳ ಹಿಂದೆ ದೂರಿದ್ದರು. ಆದ್ದರಿಂದ ಇದನ್ನು ಸರಿಪಡಿಸುವ ಉದ್ದೇಶದಿಂದ ಮುಖ್ಯಮಂತ್ರಿಗಳ ಕಾರ್ಯದರ್ಶಿ ಗಿರೀಶ್ ಹೊಸೂರ್ ಅವರ ನೇತೃತ್ವದಲ್ಲಿ ಕಡತಗಳ ವಿಲೇವಾರಿಗಾಗಿ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ. ಅಧಿಕಾರಿಗಳ ವರ್ಗಾವಣೆ, ಮುಂಬಡ್ತಿ, ಕ್ಷೇತ್ರಗಳಿಗೆ ಅನುದಾನ ಬಿಡುಗಡೆ, ಕಾಮಗಾರಿಗಳ ಅನುಷ್ಠಾನಕ್ಕೆ ಅನುಮತಿ ಸೇರಿದಂತೆ ಮುಖ್ಯಮಂತ್ರಿಗಳ ಕಚೇರಿಗೆ ಪ್ರಮುಖ ಕಡತಗಳೇ ರವಾನೆಯಾಗುತ್ತವೆ.**